# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಹಣ ಸಂದಾಯ ಮಾಡಲು ಬಳ್ಳಾರಿ ತಾಲ್ಲೂಕಿಗೆ ಹಣ ಬಿಡುಗಡೆ ಮಾಡುವ ಬಗ್ಗೆ

**ಓದಲಾದ:** 1) ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 6 ಸಿಎಂ 2008. ದಿ:07/10/2008.
2) ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 6 ಸಿಎಂ 2008. ದಿ:16/10/2008.
3) ಸರ್ಕಾರಿ ಆದೇಶ ಸಂಖ್ಯೆ:ಆರ್‌ಡಿ 54 ಡಿಎಸ್‌ಪಿ 2008, ದಿನಾಂಕ:17/10/2008.
4) ಸರ್ಕಾರಿ ಆದೇಶ ಸಂಖ್ಯೆ: ಆರ್‌ಡಿ 54 ಡಿಎಸ್‌ಪಿ 2008, ದಿನಾಂಕ:19/03/2009.
5) ಸರ್ಕಾರಿ ಆದೇಶ ಸಂಖ್ಯೆ: ಆರ್‌ಡಿ 54 ಡಿಎಸ್‌ಪಿ 2008, ದಿನಾಂಕ:19/03/2009.
6) ತಹಸೀಲ್ದಾರ್ ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ ಇವರ ಪತ್ರ ದಿನಾಂಕ:26/05/2009.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಸರ್ಕಾರಿ ಆದೇಶದನ್ವಯ ಸಾಮಾಜಿಕ ಭದ್ರತಾ ಯೋಜನೆಗಳಡಿಯ ಫಲಾನುಭವಿಗಳಿಗೆ ಸ್ಮಾರ್ಟ್‌ಕಾರ್ಡ್ ಆಧಾರಿತ ಹಣ ಸಂದಾಯ ಮಾಡುವ ಯೋಜನೆಯನ್ನು ಗುಲ್ಬರ್ಗಾ, ಚಿತ್ರದುರ್ಗ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಪ್ರಯೋಗಿಕವಾಗಿ ಅನುಷ್ಠಾನಗೊಳಿಸಲು ಸರ್ಕಾರವು ತೀರ್ಮಾನಿಸಿ ಆದೇಶವನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿನ ಸರ್ಕಾರಿ ಆದೇಶದಲ್ಲಿ ಪ್ರಾಯೋಗಿಕ ಯೋಜನೆಯಡಿಯಲ್ಲಿ ಮೊದಲನೇ ಹಂತವಾಗಿ ಬಳ್ಳಾರಿ ಜಿಲ್ಲೆಯ ಬಳ್ಳಾರಿ ತಾಲ್ಲೂಕಿನಲ್ಲಿ ಅಕ್ಟೋಬರ್ ಮಾಹೆಯ 2008 ರಿಂದ ಫೆಬ್ರವರಿ ಮಾಹೆಯ 2009 ರವರೆಗೆ ಸಾಮಾಜಿಕ ಭದ್ರತಾ ಯೋಜನೆಗಳಾದ ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ, ಸಂಧ್ಯಾ ಸುರಕ್ಷಾ ಯೋಜನೆ, ನಿರ್ಗತಿಕ ವಿಧವಾ ವೇತನ ಮತ್ತು ಅಂಗವಿಕಲ ವೇತನದ ವಿತರಣೆಯನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ಸರ್ಕಾರವು ತೀರ್ಮಾನಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ಮತ್ತು (4)ರ ಆದೇಶದನ್ವಯ ಬಳ್ಳಾರಿ ತಾಲ್ಲೂಕಿನ ಗ್ರಾಮೀಣಾ ಪ್ರದೇಶದ ಫಲಾನುಭವಿಗಳಿಗೆ ಅಕ್ಟೋಬರ್ 2008 ರಿಂದ ಫೆಬ್ರವರಿ 2009 ಮಾಹೆಯ ಪಿಂಚಣಿಯ ವಿತರಣೆಗಾಗಿ ಬೇಕಾಗಬಹುದಾದ ರೂ.86.00 ಲಕ್ಷ ಹಾಗೂ 43,58,200/- (ಒಟ್ಟು ರೂ.1,29,58,200) ಗಳನ್ನು ಬಿಡುಗಡೆ ಮಾಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರ ಆದೇಶದನ್ವಯ 3ನೇ ಹಂತವಾಗಿ ಬಳ್ಳಾರಿ ತಾಲ್ಲೂಕಿನ ಗ್ರಾಮೀಣಾ ಪ್ರದೇಶದ ಫಲಾನುಭವಿಗಳಿಗೆ ಮಾರ್ಚ್ ಮತ್ತು ಏಪ್ರಿಲ್ ಮಾಹೆಯ ಪಿಂಚಣಿ ಹಣ ವಿತರಿಸಲು ರೂ.51,44,000/- ಗಳನ್ನು ಬಿಡುಗಡೆ ಮಾಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (6)ರಲ್ಲಿನ ತಹಸೀಲ್ದಾರ್, ಬಳ್ಳಾರಿ ರವರ ಪತ್ರದಲ್ಲಿ ಬಳ್ಳಾರಿ ನಗರ ಪ್ರದೇಶದಲ್ಲಿ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಒಟ್ಟು 8327 ಫಲಾನುಭವಿಗಳಿರುತ್ತಾರೆಂದು ವರದಿ ಮಾಡುತ್ತಾ, ಈ ಫಲಾನುಭವಿಗಳಿಗೆ ಮಾರ್ಚ್ 2009 ಮಾಹೆಯಿಂದ ಮೇ 2009 ರವರೆಗಿನ ಪಿಂಚಣಿಯನ್ನು ಬ್ಯಾಂಕ್ ಉಳಿತಾಯ ಖಾತೆಯ ಮೂಲಕ ಅಥವಾ ಅಂಚೆ ಕಛೇರಿಯ ಮೂಲಕ ವಿತರಿಸಲು 99,92,400 ಲಕ್ಷಗಳ ಹೆಚ್ಚುವರಿಯಾಗಿ ಅನುದಾನ ಬೇಕಾಗಿರುತ್ತದೆಂದು ತಿಳಿಸಿರುತ್ತಾರೆ. ತಹಸೀಲ್ದಾರರ ವರದಿ ಅನ್ವಯ ಬಳ್ಳಾರಿ ತಾಲ್ಲೂಕಿನ ನಗರ ಪ್ರದೇಶದಲ್ಲಿರುವ ಫಲಾನುಭವಿಗಳಿಗೆ ಕಾರಾಣಾಂತರಗಳಿಂದ ಸ್ಮಾರ್ಟ್ ಕಾರ್ಡ್ ವಿತರಿಸದಿಲ್ಲದಿರುವುದರಿಂದ ಈ ಹಿಂದೆ ಇರುವ ಪದ್ಧತಿಯಂತೆ ಮನಿ ಅರ್ಡರ್ ಅಥವಾ ಬ್ಯಾಂಕ್ ಉಳಿತಾಯ ಖಾತೆಯ ಮೂಲಕ ಫಲಾನುಭವಿಗಳಿಗೆ ಪಿಂಚಣಿ ಹಣವನ್ನು ವಿತರಿಸಲು ಸರ್ಕಾರವು ತೀರ್ಮಾನಿಸಿರುವ ಹಿನ್ನಲೆಯಲ್ಲಿ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆರ್‌ಡಿ 54 ಡಿಎಸ್‌ಪಿ 2008, ಬೆಂಗಳೂರು. ದಿನಾಂಕ:29/05/09.**

ಸರ್ಕಾರವು ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಬಳ್ಳಾರಿ ತಾಲ್ಲೂಕಿನ ನಗರ ಪ್ರದೇಶದಲ್ಲಿರುವ ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ, ಸಂಧ್ಯಾ ಸುರಕ್ಷಾ ಯೋಜನೆ, ನಿರ್ಗತಿಕ ವಿಧವಾ ವೇತನ ಮತ್ತು ಅಂಗವಿಕಲರ ವೇತನ ಯೋಜನೆಗಳಡಿಯಲ್ಲಿರುವ ಫಲಾನುಭವಿಗಳಿಗೆ ಸ್ಮಾರ್ಟ್ ಕಾರ್ಡ್ ವಿತರಿಸುವವರೆಗೂ ಬ್ಯಾಂಕ್ ಉಳಿತಾಯ ಖಾತೆ ಅಥವಾ ಮನಿ ಆರ್ಡರ್ ಮೂಲಕ ಮಾರ್ಚ್ ಏಪ್ರಿಲ್ ಮತ್ತು ಮೇ

ತಿಂಗಳ ಪಿಂಚಣಿ ಹಣ ವಿತರಿಸಲು ಸರ್ಕಾರದ **ಅನುಮೋದನೆ ನೀಡಿದೆ.** ಈ ಫಲಾನುಭವಿಗಳಿಗೆ ಪಿಂಚಣಿ ಹಣ ವಿತರಿಸುವ ಸಲುವಾಗಿ ಫಲಾನುಭವಿಗಳ ಪಟ್ಟಿಯನ್ನು ಜಿಲ್ಲಾ ಖಜಾನಾಧಿಕಾರಿಗಳು, ಬಳ್ಳಾರಿ ಜಿಲ್ಲೆ ಇವರಿಗೆ ತಹಸೀಲ್ದಾರ್, ಬಳ್ಳಾರಿ ತಾಲ್ಲೂಕು ಇವರು ಒದಗಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಕಾತ್ಯಾಯಿನಿ ದೇವಿ) 9/5/07
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು,
ಕಂದಾಯ ಇಲಾಖೆ.

**ಇವರಿಗೆ,**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸಬೇಕೆಂದು ಕೋರಿದೆ.

**ಪ್ರತಿಯನ್ನು.**

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) (ಎ.ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, (ಆಯವ್ಯಯ ಮತ್ತು ಸಂಪನ್ಮೂಲ), ವಿಧಾನ ಸೌಧ.
5. ಜಿಲ್ಲಾಧಿಕಾರಿಗಳು ಬಳ್ಳಾರಿ ಜಿಲ್ಲೆ.
6. ಉಪ ವಿಭಾಗಧಿಕಾರಿಗಳು, ಬಳ್ಳಾರಿ ಜಿಲ್ಲೆ.
7. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
8. ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು, ಬಳ್ಳಾರಿ ಜಿಲ್ಲೆ.
9. ತಹಸೀಲ್ದಾರರು, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ.
10. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.